# ಗುಟ್ಕಾ ಹಗರಣ: ತ.ನಾಡು ಸಚಿವರ ನಿವಾಸದ ಮೇಲೆ ಸಿಬಿಐ ಅಧಿಕಾರಿಗಳ ದಾಳಿ


ವಿಜಯ ಭಾಸ್ಕರ್


ಟಿ.ಕೆ.ರಾಜೇಂದ್ರ


ಎಸ್. ಜಾರ್ಜ್

**ಚೆನ್ನೈ:** ಬಹುಕೋಟಿ ರು.ಗಳ ಗುಟ್ಕಾ ಹಗರಣಕ್ಕೆ ಸಂಬಂಧಿಸಿದಂತೆ ತಮಿಳುನಾಡಿನ ಆರೋಗ್ಯ ಸಚಿವ ಡಾ. ಸಿ.ವಿಜಯ ಭಾಸ್ಕರ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಟಿ.ಕೆ.ರಾಜೇಂದ್ರನ್, ಮಾಜಿ ಸಚಿವ ಬಿ.ವಿ.ರಮಣ, ಚೆನ್ನೈ ಮಾಜಿ ಪೊಲೀಸ್ ಆಯುಕ್ತ ಎಸ್. ಜಾರ್ಜ್ ಅವರ ನಿವಾಸ ಸೇರಿದಂತೆ ಸುಮಾರು 31 ಪ್ರದೇಶಗಳಲ್ಲಿ ಏಕ ಕಾಲಕ್ಕೆ ಸಿಬಿಐ ದಾಳಿ ನಡೆಸಿದೆ.

ದೆಹಲಿಯ ಸಿಬಿಐನ ಭ್ರಷ್ಟಾಚಾರ ನಿಗ್ರಹ-111 ವಿಭಾಗ ಬುಧವಾರ ಮುಂಜಾನೆ 7 ಗಂಟೆಯಿಂದಲೇ ದಾಳಿ ಆರಂಭಿಸಿದೆ. ಇದೇ ಮೊದಲ ಬಾರಿಗೆ ಡಿಜಿಪಿ ಅವರ ನಿವಾಸದಲ್ಲಿ ದಾಳಿ ನಡೆಯುತ್ತಿದೆ. ಅಧಿಕಾರಿಗಳು, ಮಹತ್ವದ ದಾಖಲೆಗಳನ್ನು ವಶಪಡಿಸಿಕೊಂಡು, ಪರಿಶೀಲಿಸುತ್ತಿದ್ದಾರೆ.

ಸಚಿವರ ನಿವಾಸ ಮತ್ತು ಇತರ 30 ಸ್ಥಳಗಳಲ್ಲಿ ದಾಳಿ ನಡೆಸಲಾಗುತ್ತಿದೆ ಎಂದು ಸಿಬಿಐ ವಕ್ತಾರರು ತಿಳಿಸಿದ್ದಾರೆ. ಕಸ್ಟಮ್ಸ್ ಅಧಿಕಾರಿಗಳು, ಆಹಾರ ಸುರಕ್ಷತೆ ಮತ್ತು ಮಾರಾಟ ತೆರಿಗೆ ಇಲಾಖೆ ಅಧಿಕಾರಿಗಳ ನಿವಾಸಗಳ ಮೇಲೂ ಸಿಬಿಐ ದಾಳಿ ನಡೆಸಿದೆ.

**ಏನಿದು ಪ್ರಕರಣ?:** 2017ರ ಜುಲೈ 8ರಂದು ಈ ಗುಟ್ಕಾ ಹಗರಣ ಬೆಳಕಿಗೆ ಬಂದಿತ್ತು. ಅಂದು ಆದಾಯ ತೆರಿಗೆ ಇಲಾಖೆ ತಮಿಳುನಾಡಿನ ಪಾನ್ ಮಸಾಲಾ ಮತ್ತು ಗುಟ್ಕಾ ಉತ್ಪಾದಕರ ಗೋದಾಮು, ಕಚೇರಿ ಮತ್ತು ನಿವಾಸಗಳ ಮೇಲೆ ದಾಳಿ ನಡೆಸಿ 250 ಕೋಟಿ ರು. ತೆರಿಗೆ ವಂಚನೆ ಹಗರಣವನ್ನು ಬಯಲು ಮಾಡಿತ್ತು. ಈ ಪ್ರಕರಣದಲ್ಲಿ ಸಚಿವರು ಮತ್ತು ಅಧಿಕಾರಿಗಳು 39.91 ಕೋಟಿ ರು. ಲಂಚ ಪಡೆದಿರುವುದು ಪತ್ತೆಯಾಗಿತ್ತು.

ಏಪ್ರಿಲ್‌ನಲ್ಲಿ ಮದ್ರಾಸ್ ಹೈಕೋರ್ಟ್ ಈ ಹಗರಣದ ತನಿಖೆಯನ್ನು ಸಿಬಿಐಗೆ ಒಪ್ಪಿಸಿತ್ತು. ತನಿಖೆ ಆರಂಭಿಸಿದ ಸಿಬಿಐ, ತಮಿಳುನಾಡು ಸರಕಾರ, ಕೇಂದ್ರ ಅಬಕಾರಿ ಇಲಾಖೆ ಮತ್ತು ಆಹಾರ ಭದ್ರತೆ ಇಲಾಖೆಯ ಅಧಿಕಾರಿಗಳ ವಿರುದ್ಧ ಈ ವರ್ಷ ಮೇ ತಿಂಗಳಲ್ಲಿ ಎಫ್ಐಆರ್ ದಾಖಲಿಸಿತ್ತು. ತಮಿಳುನಾಡಿನಲ್ಲಿ ತಂಬಾಕು ಮತ್ತು ಗುಟ್ಕಾಗಳನ್ನು 2013ರಲ್ಲಿ ನಿಷೇಧಿಸಲಾಗಿತ್ತು. ಆದರೂ ಅಕ್ರಮವಾಗಿ ಗುಟ್ಕಾ ಮಾರಾಟ ಮಾಡಲಾಗುತ್ತಿತ್ತು.